# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಶ್ರೀ ಎಂ.ಡಿ.ಖಾಲಿದ್ ಅಲಿ, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರ ಅಮಾನತ್ತನ್ನು ತೆರವುಗೊಳಿಸುವ ಬಗ್ಗೆ - ಆದೇಶ.

ಓದಲಾಗಿದೆ:- ಸರ್ಕಾರದ ಆದೇಶ ಸಂಖ್ಯೆ ಗ್ರಾಅಪ 164 ಇಎನ್‌ಕ್ಯೂ 2016 ದಿನಾಂಕ 16.12.2016

**ಪ್ರಸ್ತಾವನೆ:**

ದಿನಾಂಕ 15.12.2016ರಂದು ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಬೀದರ್ ಜಿಲ್ಲೆಯ ಬರ ಕಾಮಗಾರಿಗಳ ಕುರಿತಂತೆ ನಡೆಸಿದ ಪರಿಶೀಲನಾ ಸಭೆಯಲ್ಲಿ ಬೀದರ್ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಉಪ ವಿಭಾಗದಿಂದ ಕೈಗೊಳ್ಳಲಾದ ಕಾಮಗಾರಿಗಳ ಅನುಷ್ಠಾನ / ನಿರ್ವಹಣೆಯ ಕುರಿತು ಕೇಳಲಾದ ಮಾಹಿತಿಗೆ ತಪ್ಪು ಮಾಹಿತಿ ನೀಡುವ ಮೂಲಕ ಕರ್ತವ್ಯ ಲೋಪ ಎಸಗಿರುವ ಆರೋಪಕ್ಕೆ ಸಂಬಂಧಿಸಿದಂತೆ ಶ್ರೀ ಎಂ.ಡಿ.ಖಾಲಿದ್ ಅಲಿ, ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಉಪ ವಿಭಾಗ, ಬೀದರ್ ಇವರನ್ನು ಮೇಲೆ ಓದಲಾದ ದಿನಾಂಕ 16.12.2016ರ ಸರ್ಕಾರದ ಆದೇಶದಲ್ಲಿ ಅವರ ವಿರುದ್ಧದ ಶಿಸ್ತು ಕ್ರಮವನ್ನು ಬಾಕಿ ಇರಿಸಿ ಸೇವೆಯಿಂದ ಅಮಾನತ್ತುಪಡಿಸಲಾಗಿತ್ತು.

ಸರ್ಕಾರವು ಪ್ರಕರಣವನ್ನು ಕೂಲಂಕಷವಾಗಿ ಪರಿಶೀಲಿಸಿ ಶ್ರೀ ಎಂ.ಡಿ.ಖಾಲಿದ್ ಅಲಿ, ಸಹಾಯಕ ಕಾರ್ಯಪಾಲಕ ಇಂಜಿನೀಯರ್ ರವರ ಅಮಾನತ್ತನ್ನು ತೆರವುಗೊಳಿಸಿ ಸೇವೆಗೆ ಪುನರ್ ಸ್ಥಾಪಿಸಲು ನಿರ್ಧರಿಸಿರುತ್ತದೆ. ಆದ್ದರಿಂದ ಈ ಕೆಳಕಂಡ ಆದೇಶ.

**ಆದೇಶ ಸಂಖ್ಯೆ. ಗ್ರಾಅಪ 164 ಇಎನ್‌ಕ್ಯೂ 2016, ಬೆಂಗಳೂರು, ದಿನಾಂಕ.19.04.2017**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಸರ್ಕಾರವು ಶ್ರೀ ಎಂ.ಡಿ.ಖಾಲಿದ್ ಅಲಿ, ಸಹಾಯಕ ಕಾರ್ಯಪಾಲಕ ಇಂಜಿನೀಯರ್ ಇವರ ವಿರುದ್ಧದ ಶಿಸ್ತು ಕ್ರಮವನ್ನು ಕೈಬಿಟ್ಟು ತಕ್ಷಣದಿಂದ ಜಾರಿಗೆ ಬರುವಂತೆ ಅಮಾನತ್ತನ್ನು ತೆರವುಗೊಳಿಸಿ, ಸೇವೆಗೆ ಪುನರ್ ಸ್ಥಾಪಿಸಿ ಮುಂದಿನ ಆದೇಶದವರೆಗೆ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಉಪ ವಿಭಾಗ, ಬೀದರ್ ಹುದ್ದೆಯಲ್ಲಿಯೇ ಮುಂದುವರಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

19/04/2017

(ಎಸ್.ರಂಗನಗೌಡ),
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಎ),
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು (ಲೆಕ್ಕ ಪತ್ರ 1 & 2) / (ಆಡಿಟ್)
2. ಸರ್ಕಾರಕ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿ, ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ.
3. ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಕಾವೇರಿ ಭವನ, ಬೆಂಗಳೂರು.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಬೀದರ್.
5. ಮಾನ್ಯ ಗ್ರಾ.ಅ.ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ.
6. ಸಂಬಂಧಪಟ್ಟ ಅಧಿಕಾರಿಗೆ – ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಬೀದರ್ ರವರ ಮುಖಾಂತರ
7. ಗ್ರಾ.ಅ.ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ / ಉಪ ಕಾರ್ಯದರ್ಶಿ (ಆಡಳಿತ) ಇವರುಗಳ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರಿಗೆ.
8. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.